ಕರ್ನಾಟಕ ಸರ್ಕಾರ

ಸಂಖ್ಯೆ:ಆಇ 02 ಟಿಎಫ್‌ಪಿ 2020

ಕರ್ನಾಟಕ ಸರ್ಕಾರದ ಸಚಿವಾಲಯ
ಆರ್ಥಿಕ ಇಲಾಖೆ, ವಿಧಾನ ಸೌಧ
ಬೆಂಗಳೂರು ದಿನಾಂಕ:04.05.2020

## ಸುತ್ತೋಲೆ

ವಿಷಯ:-ಮುಂದುವರೆದ ಹಾಗೂ ಹೊಸ ಯೋಜನೆಗಳಿಗೆ ಸಂಬಂಧಿಸಿದಂತೆ ಆದೇಶ ಹೊರಡಿಸುವ ಬಗ್ಗೆ.

*******

ರಾಜ್ಯಾದ್ಯಂತ ಕೊರೊನ ವೈರಸ್ (Covid–19) ಸಾಂಕ್ರಾಮಿಕವಾಗಿ ಹಬ್ಬುತ್ತಿರುವ ಹಿನ್ನೆಲೆಯಲ್ಲಿ ಏಪ್ರಿಲ್ 1 ರಿಂದ ರಾಜ್ಯಾದ್ಯಂತ ಲಾಕ್‌ಡೌನ್ ಜಾರಿಗೊಳಿಸಿದ್ದರಿಂದ ಆಡಳಿತ ಇಲಾಖೆಗಳು ಮುಂದುವರೆದ ಯೋಜನೆಗಳು ಹಾಗೂ ಹೊಸ ಯೋಜನೆಗಳಿಗೆ ಸಂಬಂಧಿಸಿದಂತೆ ಆದೇಶಗಳನ್ನು ಹೊರಡಿಸುವಂತಿಲ್ಲವೆಂದು, ಒಂದು ವೇಳೆ ಹೊರಡಿಸಿದ್ದಲ್ಲಿ ಆದೇಶವನ್ನು ಹಿಂಪಡೆಯುವಂತೆ ಎಲ್ಲಾ ಆಡಳಿತ ಇಲಾಖೆಗಳಿಗೆ ಆರ್ಥಿಕ ಇಲಾಖೆಯ ಪತ್ರ ಸಂ:ಆಇ 2 ಟಿಎಫ್‌ಪಿ 2020, ದಿ:01.04.2020 ರಲ್ಲಿ ನಿರ್ದೇಶನ ನೀಡಲಾಗಿತ್ತು.

ಆದರೆ, ಕೆಲವು ಇಲಾಖೆಗಳಲ್ಲಿನ ಮುಂದುವರೆದ ಯೋಜನೆಗಳನ್ನು ಅನುಷ್ಠಾನಗೊಳಿಸುವುದು ಅಗತ್ಯವಾಗಿರುವುದನ್ನು ಆರ್ಥಿಕ ಇಲಾಖೆಯು ಮನಗಂಡಿದೆ. ಆದರೆ, ಲಾಕ್‌ಡೌನ್ ನಿಂದಾಗಿ ರಾಜ್ಯದ ಸಂಪನ್ಮೂಲ ಸಂಗ್ರಹ ಸ್ಥಗಿತವಾಗಿರುವುದರಿಂದ ಹಾಗೂ ಲಾಕ್‌ಡೌನ್ ತೆರವುಗೊಳಿಸಿದರೂ ಆರ್ಥಿಕ ಪರಿಸ್ಥಿತಿ ಸುಧಾರಿಸಲು ಸಾಕಷ್ಟು ಕಾಲಾವಕಾಶ ಬೇಕಾಗಿರುವುದರಿಂದ ಸರ್ಕಾರವು ವೆಚ್ಚವನ್ನು ಆದ್ಯತೆಗೆ ಅನುಸಾರವಾಗಿ ಮಾಡಬೇಕಾಗುತ್ತದೆ.

ಆದ್ದರಿಂದ, ಎಲ್ಲಾ ಆಡಳಿತ ಇಲಾಖೆಗಳಿಗೂ ಈ ಕೆಳಕಂಡ ಕ್ರಮಗಳನ್ನು ಅನುಸರಿಸುವಂತೆ ಸೂಚಿಸಲಾಗಿದೆ.

1) ಎಲ್ಲಾ ಮುಂದುವರೆದ ಯೋಜನೆಗಳನ್ನು ಅವಶ್ಯಕತೆಗನುಗುಣವಾಗಿ ಅನುಷ್ಠಾನಗೊಳಿಸಬೇಕಾಗಿದ್ದಲ್ಲಿ ಆರ್ಥಿಕ ಇಲಾಖೆಯ ಪೂರ್ವಾನುಮತಿಯನ್ನು ಪಡೆಯುವುದು.
2) ಆಯವ್ಯಯದಲ್ಲಿ ಘೋಷಿಸಿರುವ ಹೊಸ ಯೋಜನೆಗಳನ್ನು ಅನುಷ್ಠಾನಗೊಳಿಸುವುದು ಅತ್ಯವಶ್ಯಕವಾಗಿದ್ದಲ್ಲಿ ಸೂಕ್ತ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಯ ಅನುಮೋದನೆಗಾಗಿ ಸಲ್ಲಿಸುವುದು.
3) ಯಾವುದೇ ಹೊಸ ಯೋಜನೆ ಹಾಗೂ ಕಾಮಗಾರಿಗಳಿಗೆ ಅನುಮೋದನೆ ನೀಡುವ ಮೊದಲು ಆರ್ಥಿಕ ಇಲಾಖೆಯ ಅನುಮತಿಯನ್ನು ಪಡೆಯುವುದು.
4) ಈಗಾಗಲೇ ಅನುಮೋದನೆಗೊಂಡು, ಟೆಂಡರ್ ಆಗದಿದ್ದಲ್ಲಿ/ ಅನುಮೋದನೆಗೊಂಡು, ಟೆಂಡರ್ ಆಗಿ, work order ನೀಡದಿದ್ದಲ್ಲಿ ಹಾಗೂ ಅನುಮೋದನೆಗೊಂಡು ಟೆಂಡರ್ ಆಗಿ work order ಅನ್ನೂ ಸಹಾ ನೀಡಿದ್ದಲ್ಲಿ ಅಂತಹ ಎಲ್ಲಾ ಕಾಮಗಾರಿಗಳು ಇನ್ನೂ ಕಾರ್ಯಾರಂಭ ಆಗದೇ ಇದ್ದಲ್ಲಿ, ಇವುಗಳನ್ನು ಪ್ರಾರಂಭಿಸಲು ಆರ್ಥಿಕ ಇಲಾಖೆಯ ಪೂರ್ವಾನುಮೋದನೆ ಪಡೆಯತಕ್ಕದ್ದು.

(ಮಾನ್ಯ ಮುಖ್ಯಮಂತ್ರಿಯವರಿಂದ ಅನುಮೋದಿತ)

4/5/20

(ಐ.ಎಸ್.ಎನ್.ಪ್ರಸಾದ್)
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು
ಆರ್ಥಿಕ ಇಲಾಖೆ.

ಇವರಿಗೆ,
ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು ಹಾಗೂ ಕಾರ್ಯದರ್ಶಿಗಳು.